ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ:080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-560001,

ಸಂಖ್ಯೆ:ಕಾಶಿಇ/ಶೈವಿ/47/ಸುತ್ತೋಲೆ/2016-17

ದಿನಾಂಕ:23.01.2017

## ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನ ರಹಿತ ಪದವಿ ಕಾಲೇಜುಗಳಲ್ಲಿ ಬೋಧಕರ ಬೋಧನಾ ತರಗತಿಯ ಚಿತ್ರೀಕರಣವನ್ನು ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 68 ವಿವಿಧ 2016, ದಿ:05/01/2017.

* * * * * * * * *

ಉನ್ನತ ಶಿಕ್ಷಣದಲ್ಲಿ ಬೋಧನಾ ಗುಣಮಟ್ಟವನ್ನು ಉತ್ತಮಪಡಿಸುವ ಉದ್ದೇಶದ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನ ರಹಿತ ಪದವಿ ಕಾಲೇಜುಗಳಲ್ಲಿ ಪ್ರತಿಯೊಬ್ಬ ಭೋಧಕರ (ಪ್ರಾಂಶುಪಾಲರು, ಸಹ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು) ಬೋಧನಾ ತರಗತಿಯ ಒಂದು ಘಂಟೆ ಅವಧಿಯ ಚಿತ್ರೀಕರಣವನ್ನು ಕಡ್ಡಾಯವಾಗಿ ದಿನಾಂಕ:15.02.2017 ರೊಳಗಾಗಿ ಮಾಡಿಸಿ, ವಿಡಿಯೋ ಸಿ.ಡಿ.ಯನ್ನು ತಮ್ಮ ಬಳಿ ಇಟ್ಟುಕೊಳ್ಳಲು ಸೂಚಿಸಲಾಗಿದೆ. ಸದರಿ ವಿಡಿಯೋ ಸಿ.ಡಿ.ಯೊಂದಿಗೆ ಅಗತ್ಯ ಮಾಹಿತಿಯನ್ನೊಳಗೊಂಡಂತೆ ವರದಿಯನ್ನು ಕೇಂದ್ರ ಕಛೇರಿಯಿಂದ ಸೂಚನೆ ಬಂದಾಗ ಕಳುಹಿಸಿಕೊಡುವುದು. ಇದಕ್ಕೆ ತಗಲುವ ವೆಚ್ಚವನ್ನು ಕಾಲೇಜಿನ ಅರೆ ಸರ್ಕಾರಿ ಖಾತೆಯಾದ ಕಾಲೇಜು ಅಭಿವೃದ್ಧಿ ಸಮಿತಿ (ಸಿ.ಡಿ.ಸಿ.) ಅಥವಾ ವಾಚನಾಲಯ/ಗ್ರಂಥಾಲಯ ಖಾತೆಯಿಂದ ನಿಯಮಾನುಸಾರ ಭರಿಸಲು ಅನುಮತಿ ನೀಡಲಾಗಿದೆ.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

*ಕಾಲೇಜು ಶಿಕ್ಷಣ ನಿರ್ದೇಶಕರು*

**ಇವರಿಗೆ:**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗ- ***ತಮ್ಮ ವ್ಯಾಪ್ತಿಯ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನ ರಹಿತ ಪದವಿ ಕಾಲೇಜುಗಳಿಗೆ ರವಾನಿಸಿ, ಅಗತ್ಯ ನಿರ್ದೇಶನಗಳನ್ನು ನೀಡುವಂತೆ ಸೂಚಿಸಿದೆ.***
2) ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನ ರಹಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.(ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮೂಲಕ)

**ಪ್ರತಿಯನ್ನು:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರಿ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಧಿಕಾರಿಗಳ ಹಾಗೂ ಜಂಟಿ ನಿರ್ದೇಶಕರ ಆಪ್ತಶಾಖೆಗೆ. ಕೇಂದ್ರ ಕಛೇರಿ, ಬೆಂಗಳೂರು.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
4) ಕಛೇರಿ ಪ್ರತಿ.